# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2100(2374) |
| ಮಾನ್ಯ ಸದಸ್ಯರ ಹೆಸರು | ಡಾ|| ಎಂ.ಜಿ. ಮುಳೆ (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 27/03/2026 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಯು ನಡೆಸಿದ ದಾಳಿಗಳಲ್ಲಿ ಪತ್ತೆಯಾದ ಒಟ್ಟು ಬಾಲ ಕಾರ್ಮಿಕ ಪ್ರಕರಣಗಳ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಉದ್ದಿಮೆದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಲಾಗಿದೆ;(ವರ್ಷವಾರು ವಿವರ ನೀಡುವುದು) | ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಕಲಂ 16 ಹಾಗೂ 17ರಡಿ ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ನಡೆಸಿದ ತಪಾಸಣೆ ಸಂದರ್ಭದಲ್ಲಿ ಕೆಲಸದಲ್ಲಿ ತೊಡಗಿರುವ ಮಕ್ಕಳನ್ನು ಪತ್ತೆಹಚ್ಚಿ ಬಿಡುಗಡೆಗೊಳಿಸಿ ಪುನರ್ವಸತಿ ಕ್ರಮಗಳನ್ನು ಕೈಗೊಂಡು ತಪ್ಪಿತಸ್ಥ ಮಾಲೀಕರ ವಿರುದ್ಧ ನಿಯಮಾನುಸಾರ ಮೊಕದ್ದಮೆಗಳನ್ನು ದಾಖಲಿಸಲಾದ ವಿವರಗಳು ಈ ಕೆಳಕಂಡಂತಿದೆ. |

| ವರ್ಷ | ನಡೆಸಲಾದ ತಪಾಸಣೆಗಳ ಸಂಖ್ಯೆ | ರಕ್ಷಿಸಲಾದ ಬಾಲ ಕಾರ್ಮಿಕರ ಸಂಖ್ಯೆ | ಸಕ್ಷಮ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಿದ ಪ್ರಕರಣಗಳ ಸಂಖ್ಯೆ | ದಾಖಲಾದ ಪ್ರಕರಣಗಳ ಸಂಖ್ಯೆ |
|---|---|---|---|---|
| 2023-24 | 416 | 08 | 08 | 08 |
| 2024-25 | 483 | 10 | 10 | 10 |
| 2025-26 | 465 | 13 | 13 | 13 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | ವಿವಿಧ ಹೋಟೆಲ್, ಗ್ಯಾರೇಜ್ ಹಾಗೂ ಇತರೆ ಉದ್ದಿಮೆಗಳಿಂದ ರಕ್ಷಿಸಲ್ಪಟ್ಟ ಮಕ್ಕಳ ಪುನರ್ವಸತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಅವರನ್ನು ಮರುಶಿಕ್ಷಣದ ಮುಖ್ಯವಾಹಿನಿಗೆ ತರಲು ವಿಶೇಷ ಸೇತುವೆ ಶಾಲೆಗಳ(Bridge Schools) ವ್ಯವಸ್ಥೆ ಜಾರಿಯಲ್ಲಿದೆಯೇ ಇದ್ದಲ್ಲಿ ಅದರ ವಿವರವೇನು; | ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಕಲಂ 17ರಡಿ ಸರ್ಕಾರದ 11 ಇಲಾಖೆಗಳ ಅಧಿಕಾರಿಗಳನ್ನು ಹಾಗೂ ಕಲಂ 16 ರಡಿಯಲ್ಲಿ ಪೊಲೀಸ್ ಇಲಾಖೆ ಹಾಗೂ ಕಾರ್ಮಿಕ ಇಲಾಖೆಯ ಅಧಿಕಾರಿ/ನಿರೀಕ್ಷಕರನ್ನು ನಿರೀಕ್ಷಕರುಗಳನ್ನಾಗಿ ನೇಮಿಸಲಾಗಿದೆ. ಅಧಿಸೂಚಿಸಲ್ಪಟ್ಟ ಅಧಿಕಾರಿಗಳ ಹೋಬಳಿವಾರು ತಂಡವನ್ನು ರಚಿಸಿ ಪ್ರತಿಯೊಂದು ತಂಡವೂ ಮಾಸಿಕ ಕನಿಷ್ಠ 15 ತಪಾಸಣೆಗಳನ್ನು ಕೈಗೊಳ್ಳಲು ನಿರ್ದೇಶನ ನೀಡಲಾಗಿರುತ್ತದೆ.<br><br>ತಪಾಸಣೆ ಹಾಗೂ ಜಂಟಿ ದಾಳಿ ಮಾಡಿದ ಸಂದರ್ಭದಲ್ಲಿ ಹೋಟೆಲ್, ಗ್ಯಾರೇಜ್ ಹಾಗೂ ಇತರೆ ಉದ್ದಿಮೆಗಳಲ್ಲಿ ಪತ್ತೆಯಾದ ಬಾಲ ಹಾಗೂ ಕಿಶೋರ ಕಾರ್ಮಿಕ ಮಕ್ಕಳನ್ನು ಬಿಡುಗಡೆಗೊಳಿಸಿ ಕಲ್ಯಾಣ ಸಮಿತಿ (Child Welfare Committee)ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ, ಮುಖ್ಯವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡಲು ಕ್ರಮ ಕೈಗೊಳ್ಳುವುದು ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಗೆ ಬರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ / ಕಿತ್ತೂರು ರಾಣಿ ಚೆನ್ನಮ್ಮ/ ಅಟಲ್ ಬಿಹಾರಿ ವಾಜಪೇಯಿ/ ಶ್ರೀಮತಿ ಇಂದಿರಾಗಾಂಧಿ/ ಡಾ|| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಮತ್ತು ಶ್ರೀ ನಾರಾಯಣ ಗುರು ಶಾಲೆಗಳಿಗೆ ವಿಶೇಷ ವರ್ಗಗಳ ಅಭ್ಯರ್ಥಿಗಳನ್ನು ಪ್ರವೇಶ ಪರೀಕ್ಷೆ ಇಲ್ಲದೆ ನೇರವಾಗಿ ದಾಖಲಾತಿ |

<table>
<tr><td></td><td></td><td>ಮಾಡಲಾಗುತ್ತಿದೆ. ಆದರೆ, ತಪಾಸಣೆ/ದಾಳಿಗಳಲ್ಲಿ ಪತ್ತೆಮಾಡಿ ರಕ್ಷಿಸಿ ಪುನರ್ವಸತಿಗೊಳಿಸಲಾದ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಮುಖ್ಯವಾಹಿನಿಗೆ ತರಲು ಕಾರ್ಮಿಕ ಇಲಾಖೆ ವತಿಯಿಂದ ಯಾವುದೇ ವಿಶೇಷ ಸೇತುಬಂಧ ಶಾಲೆಗಳ(bridge schools) ವ್ಯವಸ್ಥೆ ಇರುವುದಿಲ್ಲ.</td></tr>
<tr><td>ಇ)</td><td>ಅಪಾಯಕಾರಿಯಾದ ಉದ್ದಿಮೆಗಳು ಮತ್ತು ವಾಣಿಜ್ಯ ಸಂಕೀರ್ಣಗಳಲ್ಲಿ ಬಾಲಕಾರ್ಮಿಕರನ್ನು ಬಳಸಿಕೊಳ್ಳದಂತೆ ನಿಯಂತ್ರಿಸಲು ಕಳೆದ ಒಂದು ವರ್ಷದಲ್ಲಿ ಇಲಾಖೆಯ ವತಿಯಿಂದ ಎಷ್ಟು ಕಾರ್ಮಿಕ ತಪಾಸಣೆಗಳು (Inspections) ನಡೆಸಲಾಗಿದೆ;<br>(ತಾಲ್ಲೂಕುವಾರು ವಿವರ ನೀಡುವುದು)</td><td>ಕಳೆದ ಒಂದು ವರ್ಷ(2025-26)ದಲ್ಲಿ ಬೀದರ್ ಜಿಲ್ಲೆಯಲ್ಲಿ ತಪಾಸಣೆ ನಡೆಸಿದ ತಾಲ್ಲೂಕುವಾರು ವಿವರಗಳು ಈ ಕೆಳಕಂಡಂತಿದೆ.
<table>
<tr><th>ತಾಲ್ಲೂಕ ಹೆಸರು</th><th>ತಪಾಸಣೆಗಳ ಸಂಖ್ಯೆ</th></tr>
<tr><td>ಬೀದರ</td><td>118</td></tr>
<tr><td>ಭಾಲ್ಕಿ</td><td>74</td></tr>
<tr><td>ಬಸವ ಕಲ್ಯಾಣ</td><td>76</td></tr>
<tr><td>ಹುಮನಾಬಾದ</td><td>65</td></tr>
<tr><td>ಔರಾದ</td><td>132</td></tr>
<tr><td>ಒಟ್ಟು</td><td>465</td></tr>
</table></td></tr>
<tr><td>ಈ)</td><td>ಸಾರ್ವಜನಿಕರು ಹಾಗೂ ಉದ್ಯಮ ಮಾಲೀಕರಲ್ಲಿ ಅರಿವು ಮೂಡಿಸಲು ಜಿಲ್ಲೆಯ ಕೈಗಾರಿಕಾ ಪ್ರದೇಶಗಳು ಮತ್ತು ಗ್ರಾಮೀಣ ಭಾಗಗಳಲ್ಲಿ ಎಷ್ಟು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಈ ಕಾರ್ಯಕ್ರಮಗಳಿಗಾಗಿ ಬಿಡುಗಡೆಗೊಂಡ ಅನುದಾನದ ಮೊತ್ತ ಎಷ್ಟು;</td><td>ಸಾರ್ವಜನಿಕರು ಹಾಗೂ ಉದ್ಯಮ ಮಾಲೀಕರಲ್ಲಿ ಅರಿವು ಮೂಡಿಸಲು ಜಿಲ್ಲೆಯ ಕೈಗಾರಿಕಾ ಪ್ರದೇಶಗಳು ಮತ್ತು ಗ್ರಾಮೀಣ ಭಾಗಗಳಲ್ಲಿ ಜಾಗೃತಿ ಕಾರ್ಯಕ್ರಮಗಳಿಗೆ ರೂ.1,18,064/-ಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಜನ-ಜಾಗೃತಿ ಕಾರ್ಯಕ್ರಮಗಳಾದ ಗೋಡೆಬರಹ, ಆಟೋ ಪ್ರಚಾರ ಹಾಗೂ ಕಾನೂನು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸದರಿ ಕಾರ್ಯಕ್ರಮಗಳಿಗೆ ರೂ.59,032/-ಗಳ ಮೊತ್ತವನ್ನು ವೆಚ್ಚ ಮಾಡಲಾಗಿರುತ್ತದೆ.</td></tr>
<tr><td>ಉ)</td><td>ಬಾಲಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ತಡೆಗಟ್ಟಲು Child and Adolescent Labour(Prohibition and Regulation) Act, 1986 ಅನ್ವಯವಾಗಿ ಪೊಲೀಸ್, ಕಂದಾಯ ಮತ್ತು ಶಿಕ್ಷಣ ಇಲಾಖೆಗಳ ಸಮನ್ವಯದೊಂದಿಗೆ ಜಿಲ್ಲೆಯಲ್ಲಿ ವಿಶೇಷ ಕಾರ್ಯಪಡೆ Special Task Force/Anti-Child Labour Cell) ರಚಿಸಲಾಗಿದೆಯೇ; ಇದ್ದಲ್ಲಿ ಈ ಕಾರ್ಯಪಡೆಯು ಎಷ್ಟು ಅವಧಿಗೊಮ್ಮೆ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡುತ್ತದೆ.</td><td>ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಲಹಾ ಸಮಿತಿ, ಕಾರ್ಯಕಾರಿ ಸಮಿತಿಗಳನ್ನು ಹಾಗೂ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಬಾಲ ಕಾರ್ಮಿಕತೆ ನಿರ್ಮೂಲನೆ ಹಾಗೂ ಪುನರ್ವಸತಿ ಸಮಿತಿಗಳನ್ನು ರಚಿಸಲಾಗಿರುತ್ತದೆ.<br><br>ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಸಂಬಂಧ ಸರ್ಕಾರದ ಆದೇಶ ಸಂಖ್ಯೆ:ಕಾಇ 12 ಸಿಎಲ್‌ಸಿ 2023, ಬೆಂಗಳೂರು ದಿನಾಂಕ:20/09/2023ರಲ್ಲಿ ಜಿಲ್ಲೆಗಳಲ್ಲಿ ಜಿಲ್ಲಾ ದಂಡಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಕಾರ್ಯಪಡೆ (Task Force) ಯನ್ನು ಹಾಗೂ ತಾಲ್ಲೂಕಿನಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಕಾರ್ಯಪಡೆ (Task Force) ಯನ್ನು ರಚಿಸಲಾಗಿದೆ. ಸದರಿ ಕಾರ್ಯಪಡೆಯು 03 ತಿಂಗಳಿಗೊಮ್ಮೆ ಸಭೆಯನ್ನು ನಡೆಸಿ ಪ್ರಗತಿ ಪರಿಶೀಲನೆ ಮಾಡಲು ಕ್ರಮ ಕೈಗೊಳ್ಳಲು ನಿರ್ದೇಶನ ನೀಡಲಾಗಿದೆ.</td></tr>
</table>

**ಕಾಇ 29 ಸಿಎಲ್‌ಸಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**